# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2218
ಸದಸ್ಯರ ಹೆಸರು : ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 18.03.2022.
ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಗ್ರಾಮ ಠಾಣಾ ವ್ಯಾಪ್ತಿಯಲ್ಲಿ ವಿಸ್ತರಿಸುವ ಸಲುವಾಗಿ ಹಾಗೂ ಗ್ರಾಮ ಠಾಣೇತರ ವ್ಯತ್ಯಾಸವನ್ನು ಸಂಪೂರ್ಣವಾಗಿ ತೆಗೆದು ಹಾಕುವ ಸಲುವಾಗಿ ಈ ಸ್ವತ್ತಿಗೆ ತಿದ್ದುಪಡಿ ತರಲು ಸರ್ಕಾರ ಕ್ರಮ ತೆಗೆದುಕೊಂಡಿದೆಯೇ; (ವಿವರ ನೀಡುವುದು) | ಇಲ್ಲ. |
| (ಆ) | ಹಾಗಿದ್ದಲ್ಲಿ, ಈ ಪ್ರಕ್ರಿಯೆ ಯಾವ ಹಂತದಲ್ಲಿದೆ; (ವಿವರ ನೀಡುವುದು) | ಉದ್ಭವಿಸುವುದಿಲ್ಲ. |
| (ಇ) | ಈ ಹಿಂದೆ ಒಂದು ಎಕರೆಗೂ ಕಡಿಮೆ ಇದ್ದ ಜಮೀನಿಗೆ ಮ್ಯುಟೇಷನ್ ಅಧಿಕಾರವನ್ನು ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನೀಡಲಾಗಿದ್ದು, ಅಗ ನಗರ ಯೋಜನೆಯ ಅಗತ್ಯವಿಲ್ಲದಿರುವುದರಿಂದ ತಾಲ್ಲೂಕು ಪಂಚಾಯಿತಿ ವ್ಯಾಪ್ತಿ/ಗ್ರಾಮ ಪಂಚಾಯಿತಿ ವ್ಯಾಪ್ತಿ ನಗರ ಯೋಜನೆ (ಟೌನ್ ಪ್ಲ್ಯಾನಿಂಗ್) ಕಡ್ಡಾಯಗೊಳಿಸಲಾಗಿದೆಯೇ; (ವಿವರಗಳೊಂದಿಗೆ ಸರ್ಕಾರದ ಆದೇಶ/ಸುತ್ತೋಲೆ/ಅಧಿಸೂಚನೆಯ ಪ್ರತಿ ಒದಗಿಸುವುದು) | ಹೌದು.<br><br>ನಗರಾಭಿವೃದ್ಧಿ ಇಲಾಖೆಯ ಅಧಿಸೂಚನೆ ಸಂಖ್ಯೆ: DPAL 36 SHASANA 2021, DATED: 07-10-2021 ರ ಅಧಿಸೂಚನೆಯಂತೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನೆ (ತಿದ್ದುಪಡಿ) ಅಧಿನಿಯಮ, 2021, ದಿನಾಂಕ:05-07-2021 ರಿಂದ ಜಾರಿಗೆ ಬಂದಿದ್ದು, ಪ್ರಕರಣ 4 ಕ್ಕೆ ಹೊಸದಾಗಿ ಸೇರ್ಪಡೆ ಮಾಡಲಾಗಿದ್ದು, ಸ್ಥಳೀಯ ಯೋಜನಾ ಪ್ರದೇಶವನ್ನು ಹೊರತುಪಡಿಸಿದ ಪ್ರದೇಶದಲ್ಲಿ ಭೂ ಅಭಿವೃದ್ಧಿ ಬಗ್ಗೆ ಉಪಬಂಧ ಕಲ್ಪಿಸಲಾಗಿದ್ದು, ಸ್ಥಳೀಯ ಯೋಜನಾ ಪ್ರದೇಶವನ್ನು ಹೊರತುಪಡಿಸಿದ ಯಾವುದೇ ಭೂಮಿಯ ಮೇಲೆ ಅಭಿವೃದ್ಧಿಯನ್ನು ಕೈಗೊಳ್ಳಲು ಉದ್ದೇಶಿಸಿರುವ ಯಾರೇ ವ್ಯಕ್ತಿಯು ಅನುಮತಿಗಾಗಿ ಸ್ಥಳೀಯ ಪ್ರಾಧಿಕಾರಕ್ಕೆ ಲಿಖಿತ ಅರ್ಜಿಯನ್ನು ಸಲ್ಲಿಸತಕ್ಕದ್ದು. ಸ್ಥಳೀಯ ಪ್ರಾಧಿಕಾರವು ಅನುಮತಿ ನೀಡುವ ಮೊದಲು ಪಟ್ಟಣ ಮತ್ತು ಗ್ರಾಮಾಂತರ ಯೋಜನಾ ನಿರ್ದೇಶಕರ ಅಥವಾ ಅವರಿಂದ ಅಧಿಕೃತಗೊಂಡು ನಗರ ಯೋಜನೆ ಸಹಾಯಕ ನಿರ್ದೇಶಕರ ದರ್ಜೆಗೆ ಕಡಿಮೆಯಲ್ಲದ ಯಾರೇ ಅಧೀನ ಅಧಿಕಾರಿಯ ಪೂರ್ವಾನುಮೋದನೆಯನ್ನು ಪಡೆಯತಕ್ಕದ್ದು ಎಂದು ತಿಳಿಸಲಾಗಿದೆ.<br><br>ಸರ್ಕಾರದ ಪತ್ರ ಸಂಖ್ಯೆ: ಆರ್‌ಡಿಪಿಆರ್/10/ಜಿಪಿಎ/2021 ದಿನಾಂಕ:28-02-2022 ಅನ್ನು ಅನುಬಂಧ-1 ರಲ್ಲಿ ನೀಡಿದೆ. |

| | | |
|---|---|---|
| (ಈ) | ನಿಗದಿಪಡಿಸಿದ್ದ ತೆರಿಗೆ ಗುರಿಯಂತೆ ಸಂಗ್ರಹವಾಗಿದೆಯೇ? (ಹಾಗಿದ್ದಲ್ಲಿ, ಸಂಗ್ರಹವಾದ ತೆರಿಗೆಯ ವಿವರವಾದ ಮಾಹಿತಿಯನ್ನು ಜಿಲ್ಲಾವಾರು ಒದಗಿಸುವುದು) | 2020-21ನೇ ಸಾಲಿನಲ್ಲಿ ರಾಜ್ಯದಲ್ಲಿನ ಗ್ರಾಮ ಪಂಚಾಯತಿಗಳಿಂದ ಶೇಕಡ 100 ರಷ್ಟು ಆಸ್ತಿ ತೆರಿಗೆ ಮೊತ್ತ ಸಂಗ್ರಹಿಸುವ ಗುರಿ ಹೊಂದಲಾಗಿತ್ತು.<br><br>ಕೋವಿಡ್-19 ಲಾಕ್‌ಡೌನ್‌ನಿಂದಾಗಿ 2020-21ನೇ ಸಾಲಿನಲ್ಲಿ ಪ್ರಸಕ್ತ ಸಾಲಿನ ಬೇಡಿಕೆಗನುಗುಣವಾಗಿ ಶೇ. 88 ರಷ್ಟು ತೆರಿಗೆಯನ್ನು ಗ್ರಾಮ ಪಂಚಾಯತಿಗಳು ವಸೂಲಿ ಮಾಡಿರುತ್ತವೆ.<br><br>2021-22ನೇ ಸಾಲಿನಲ್ಲಿ ಪ್ರಸಕ್ತ ಸಾಲಿನ ಬೇಡಿಕೆಗನುಗುಣವಾಗಿ ದಿನಾಂಕ:14-03-2022 ರವರೆಗೆ ಗ್ರಾಮ ಪಂಚಾಯತಿಗಳು ತೆರಿಗೆಯನ್ನು ವಸೂಲಿ ಮಾಡಿರುವ ವಿವರವನ್ನು ಅನುಬಂಧ-2 ರಲ್ಲಿ ನೀಡಿದೆ. |

ಸಂ. ಗ್ರಾಅಪ 130 ಗ್ರಾಪಂಅ 2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು.